**ಕರ್ನಾಟಕ ವಿಧಾನ ಪರಿಷತ್**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 858 |
| ಸದಸ್ಯರ ಹೆಸರು | : | ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18.12.2018 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾಗಿರುವ ನಿವೇಶನಗಳನ್ನು ವಿಂಗಡಿಸಿ ಮಾರಾಟ ಮಾಡಿದ ನಿವೇಶನಗಳನ್ನು ಮರು ವಿಂಗಡಿಸಿದ ನಿವೇಶಗಳಿಗೆ "ಇ" ಖಾತಾ ಮಾಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಬಂದಿದ್ದಲ್ಲಿ 40X60 ಅಡಿಗಳ ನಿವೇಶನಗಳನ್ನು ಮರು ವಿಂಗಡಿಸಿ 20X30 ಅಡಿಗಳಾಗಿ ಪರಿವರ್ತಿಸಿ ನಿವೇಶನಗಳಿಗೆ "ಇ" ಖಾತಾವನ್ನು ಗ್ರಾಮ ಪಂಚಾಯಿತಿಗಳಲ್ಲಿ ಮಾಡುತ್ತಿಲ್ಲವಾದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; | ಗಮನಿಸಿದೆ. ಇಂತಹ ನಿವೇಶನಗಳು ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಗೊಂಡಿರುವ ಬಡಾವಣೆಯಲ್ಲಿದ್ದಲ್ಲಿ ಮತ್ತೆ ಮರು ವಿಂಗಡಣೆ ಮಾಡಲು ಪ್ರಾಧಿಕಾರದ ಅನುಮೋದನೆ ಪಡೆದು ವಿಭಜನೆ ಮಾಡಿಕೊಂಡಲ್ಲಿ ಗ್ರಾಮ ಪಂಚಾಯತಿಗಳು ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9, 11ಎ ಗಳನ್ನು ನೀಡಬಹುದಾಗಿದೆ. |
| ಇ | ಹಾಗಿದ್ದಲ್ಲಿ ಮರು ವಿಂಗಡಣೆ ಮಾಡಿದ ನಿವೇಶನಗಳನ್ನು ಕೂಡಲೇ "ಇ" ಖಾತಾ ಮಾಡಿಕೊಡಲು ಆದೇಶ ಹೊರಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ; (ವಿವರ ನೀಡುವುದು) | ಮೇಲಿನಂತೆ ನಮೂನೆ 9 ಮತ್ತು 11ಎ ನೀಡಲು ಅವಕಾಶವಿರುತ್ತದೆ. |
| ಈ | ಈ ಬಗ್ಗೆ ಆಯಾ ಯೋಜನಾ ಪ್ರಾಧಿಕಾರಕ್ಕೆ ಸರ್ಕಾರದಿಂದ ಸೂಕ್ತ ನಿರ್ದೇಶನ ನೀಡಲು ತಕ್ಷಣ ಕ್ರಮ ತೆಗೆದುಕೊಳ್ಳುವುದೇ; | ಅನ್ವಯಿಸುವುದಿಲ್ಲ. |
| ಉ | ನಿವೇಶನಗಳಿಗೆ ಖಾತಾ ಮಾಡುವಾಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಬೆರಳಚ್ಚು ಮುದ್ರೆ (Thumb Impression) ನಿಯಮ ಇರುವುದರಿಂದ ಈ ನಿಯಮದಿಂಧ ಸಾರ್ವಜನಿಕರಿಗೆ ವಿಳಂಬವಾಗಿ ತೊಂದರೆಯಾಗುವುದಿಲ್ಲವೆ; ಈ ಅಧಿಕಾರವನ್ನು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ (ಪಿ.ಡಿ.ಓ.) ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ? | ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ರಾಮನಗರ ಮತ್ತು ಕೋಲಾರ ಜಿಲ್ಲೆಗಳ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9, 11ಎ ಮತ್ತು 11ಬಿ ನೀಡುವಲ್ಲಿ ಹೆಚ್ಚಿನ ಅಕ್ರಮಗಳು ನಡೆಯುವುದನ್ನು ತಪ್ಪಿಸಲು ಈ ಪ್ರಕ್ರಿಯೆಯಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜವಾಬ್ದಾರಿ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ 1248 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.